# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | **63** |
| ವಿಧಾನ ಪರಿಷತ್ತಿನ ಸದಸ್ಯರ ಹೆಸರು | : | ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) |
| ಉತ್ತರಿಸಬೇಕಾದ ದಿನಾಂಕ | : | 03.03.2020 |
| ಉತ್ತರಿಸುವ ಸಚಿವರು | : | ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖಾ ಸಚಿವರು. |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | 2018-19, 2019-20ರಲ್ಲಿ ಅನ್ನಭಾಗ್ಯ ಯೋಜನೆ ಅನ್ವಯ ಒಟ್ಟು ಫಲಾನುಭವಿಗಳ ಸಂಖ್ಯೆ ಎಷ್ಟು; ಈ ಯೋಜನೆ ಅನ್ವಯ ಪ್ರಸ್ತುತ ನೀಡುವ ಅಕ್ಕಿ ಮತ್ತು ಇತರ ವಸ್ತುಗಳ ವಿವರ ನೀಡುವುದು; | ಅನ್ನಭಾಗ್ಯ ಯೋಜನೆ ಫಲಾನುಭವಿಗಳ ಮಾಹಿತಿಯು ಈ ಕೆಳಕಂಡಂತಿದೆ.<br><br>\| \| 2018-19 \| 2019-20 \|<br>\| ಅಂತ್ಯೋದಯ \| 7,76,287 \| 10,93,751 \|<br>\| ಆದ್ಯತಾ ಕುಟುಂಬ \| 1,16,78,056 \| 1,16,08,196 \|<br><br>2018-19 ಮತ್ತು 2019-20 ನೇ ಸಾಲಿನಲ್ಲಿ ಅಂತ್ಯೋದಯ ಪಡಿತರ ಚೀಟಿಯನ್ನು ಹೊಂದಿರುವ ಕುಟುಂಬಗಳಿಗೆ ತಿಂಗಳಿಗೆ 35 ಕೆ.ಜಿ ಅಕ್ಕಿಯನ್ನು ಹಾಗೂ ಆದ್ಯತಾ ಕುಟುಂಬ ಪಡಿತರ ಚೀಟಿಯನ್ನು ಹೊಂದಿರುವ ಕುಟುಂಬಗಳ ಪ್ರತಿ ಸದಸ್ಯರಿಗೆ ತಿಂಗಳಿಗೆ 7 ಕೆ.ಜಿ ಅಕ್ಕಿಯನ್ನು ನೀಡಲಾಗುತ್ತಿದೆ. |
| ಆ | ರಾಜ್ಯದಲ್ಲಿ ಅನ್ನಭಾಗ್ಯ ಯೋಜನೆ ಅನ್ವಯ ಪ್ರಸ್ತುತ ನೀಡುತ್ತಿರುವ ಅಕ್ಕಿ ಮತ್ತು ಇತರ ವಸ್ತುಗಳನ್ನು ಕಡಿತಗೊಳಿಸಲಾಗಿದೆಯೇ; ಈ ಬಗ್ಗೆ ಸರ್ಕಾರದಿಂದ ಸುತ್ತೋಲೆ ನೀಡಲಾಗಿದೆಯೇ; ಇದರಿಂದಾಗಿ ಸರ್ಕಾರಕ್ಕೆ ತಗಲುವ ವೆಚ್ಚ ಎಷ್ಟು; | ಇಲ್ಲ. |

| | | |
|---|---|---|
| ಇ | ಅನ್ನಭಾಗ್ಯ ಯೋಜನೆಯ ಅಕ್ಕಿಯನ್ನು ಅಕ್ರಮವಾಗಿ ಮಾರಾಟ ಮಾಡುವವರ ಬಗ್ಗೆ ರಾಜ್ಯದಲ್ಲಿ ಎಷ್ಟು ಪ್ರಕರಣಗಳು ಪತ್ತೆಯಾಗಿದೆ; ಅವರಿಂದ ವಶಪಡಿಸಿಕೊಂಡ ಅಕ್ಕಿ ಎಷ್ಟು; | 2019-20ನೇ ಸಾಲಿನಲ್ಲಿ ಅನ್ನಭಾಗ್ಯ ಯೋಜನೆಯಡಿ ಅಕ್ಕಿಯನ್ನು ಅಕ್ರಮವಾಗಿ ಮಾರಾಟ ಮಾಡಿರುವವರ ವಿರುದ್ಧ ಅಗತ್ಯ ವಸ್ತುಗಳ ಕಾಯ್ದೆ 1955ರ ಅಡಿಯಲ್ಲಿ ಇದುವರೆಗೂ 154 ಪ್ರಕರಣಗಳನ್ನು ದಾಖಲಿಸಲಾಗಿದೆ ಹಾಗೂ 11,534.79 ಕ್ವಿಂ ಅಕ್ಕಿಯನ್ನು ವಶಪಡಿಸಿಕೊಳ್ಳಲಾಗಿದೆ. |
| ಈ | ರಾಜ್ಯದಲ್ಲಿ ಎಷ್ಟು ಟನ್ ಅಕ್ಕಿಯನ್ನು ಪ್ರತಿ ತಿಂಗಳು ಒದಗಿಸಲಾಗುತ್ತಿದೆ; ಎಲ್ಲಿಂದ ಅಕ್ಕಿಯನ್ನು ಖರೀದಿಸಲಾಗುತ್ತದೆ; ಪ್ರಸ್ತುತ ಯಾವ ದರದಲ್ಲಿ ಅಕ್ಕಿಯನ್ನು ಸರ್ಕಾರ ಕೊಂಡುಕೊಳ್ಳುತ್ತದೆ; (ವಿವರ ನೀಡುವುದು) | ಜನವರಿ -2020ರ ಹಂಚಿಕೆಯಂತೆ ರಾಜ್ಯದ ಅಂತ್ಯೋದಯ ಮತ್ತು ಆದ್ಯತಾ ಪಡಿತರ ಚೀಟಿದಾರರಿಗೆ ಒಟ್ಟು 3,04,851.507 ಮೆ.ಟನ್ ಅಕ್ಕಿ ಅವಶ್ಯಕವಿದ್ದು. ಅದರಲ್ಲಿ ರಾಷ್ಟ್ರೀಯ ಆಹಾರ ಭದ್ರತಾ ಕಾಯ್ದೆಯಡಿಯಲ್ಲಿ ಪ್ರತಿ ತಿಂಗಳು ಕೇಂದ್ರ ಸರ್ಕಾರದಿಂದ 2,17,403 ಮೆ.ಟನ್ ಅಕ್ಕಿಯನ್ನು ಪ್ರತಿ ಕೆ.ಜಿ.ಗೆ ರೂ.3/- ರಂತೆ ಪಾವತಿಸಿ ಕೇಂದ್ರ ಸರ್ಕಾರದಿಂದ ಹಂಚಿಕೆಯನ್ನು ಪಡೆಯಲಾಗುತ್ತಿದೆ. ಕೇಂದ್ರ ನಿಗಧಿಪಡಿಸಿರುವ ಪ್ರಮಾಣಕ್ಕಿಂತ ಹೆಚ್ಚುವರಿಯಾಗಿ ವಿತರಿಸುವ ಆದ್ಯತಾ ಪಡಿತರ ಚೀಟಿಗಳಿಗೆ ಹಾಗೂ ರಾಜ್ಯ ಸರ್ಕಾರವು ಹೆಚ್ಚುವರಿಯಾಗಿ ಪ್ರತಿ ಫಲಾನುಭವಿಗೆ ನೀಡುತ್ತಿರುವ 2 ಕೆ.ಜಿ ಅಕ್ಕಿಯನ್ನು ಸೇರಿ ಪ್ರತಿ ಮಾಹೆಗೆ ಸುಮಾರು 80000 ಮೆ.ಟನ್ ಅಕ್ಕಿಯ ಅಗತ್ಯವಿದ್ದು, ಈ ಅಕ್ಕಿಯನ್ನು ಭಾರತ ಆಹಾರ ನಿಗಮದಿಂದ Open market Sale Scheme OMSS(D) ಮೂಲಕ ಪ್ರತಿ ಮೆ.ಟನ್‌ಗೆ ರೂ.22500 ರ ದರದಲ್ಲಿ ಖರೀದಿಸಲಾಗುತ್ತಿದೆ. |
| ಉ | ಅನ್ನಭಾಗ್ಯ ಯೋಜನೆಯ ಅಕ್ಕಿಯನ್ನು ಕಡಿತಗೊಳಿಸುವ ಉದ್ದೇಶ ಸರ್ಕಾರದ ಮುಂದಿದೆಯೇ; ಇದ್ದರೆ ವಿವರ ನೀಡುವುದು? | ಪ್ರಸ್ತುತ ಅನ್ನಭಾಗ್ಯ ಯೋಜನೆಯಲ್ಲಿ ಪಡಿತರ ಕುಟುಂಬದ ಪ್ರತಿ ಸದಸ್ಯರಿಗೆ 7 ಕೆ.ಜಿ ಅಕ್ಕಿಯನ್ನು ವಿತರಿಸಲಾಗುತ್ತಿದೆ. |

**ಆನಾಸ 47 ಡಿಆರ್ ಎ 2020 (ಇ-ಆಫೀಸ್)**

(ಕೆ.ಗೋಪಾಲಯ್ಯ)

ಆಹಾರ, ನಾಗರಿಕ ಸರಬರಾಜು ಮತ್ತು

ಗ್ರಾಹಕರ ವ್ಯವಹಾರಗಳ ಹಾಗೂ

ಕಾನೂನು ಮಾಪನಶಾಸ್ತ್ರ ಇಲಾಖಾ ಸಚಿವರು.